**Akashvani : Bangalore**
**Regional Bulletin In Kannada**
**05.08.2025 / 18.40 hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**05.08.2025 / 18.40 hrs**

**<><*<><>*><>**

**ಮುಖ್ಯಾಂಶಗಳು**

**೧. ಹೈಕೋರ್ಟ್ ನ್ಯಾಯಾಂಗ ನಿಂದನೆ ಎಚ್ಚರಿಕೆ ಹಿನ್ನೆಲೆ ; ಮುಷ್ಕರ ಹಿಂಪಡೆದ ಸಾರಿಗೆ ನೌಕರರು**

**೨. ಡಬ್ಬಲ್ ಡೆಕ್ಕರ್ ಯೋಜನೆ ಭೂ ಸ್ವಾಧೀನಕ್ಕೆ ಅನುದಾನ ನೀಡುವಂತೆ ಕೇಂದ್ರಕ್ಕೆ ಮನವಿ ಸಲ್ಲಿಸಲು ಸರ್ಕಾರ ನಿರ್ಧಾರ**

**೩. ಬೆಂಗಳೂರು-ಬೆಳಗಾವಿ ನೂತನ ವಂದೇ ಭಾರತ್ ರೈಲಿಗೆ ಇದೇ ೧೦ ರಂದು ಪ್ರಧಾನಿ ಹಸಿರು ನಿಶಾನೆ**

**೪. ಅಮೆರಿಕದ ಬೋಸ್ಟನ್‌ನಲ್ಲಿ ಶಾಸಕಾಂಗ ಶೃಂಗಸಭೆ ; ಸಂಸದೀಯ ಅನುಭವ ಹಂಚಿಕೊಂಡ ಸಭಾಪತಿ ಬಸವರಾಜ ಹೊರಟ್ಟಿ**

**೫. ಧರ್ಮಸ್ಥಳ ಪ್ರಕರಣ ; ಎಲ್ಲಾ ಪ್ರಕರಣ ಎಸ್‌ಐಟಿಗೆ ಹಸ್ತಾಂತರಿಸುವಂತೆ ಪೊಲೀಸ್ ಮಹಾ ನಿರ್ದೇಶಕರ ಆದೇಶ**

**<><*<><>*><>**

ರಾಜ್ಯದಲ್ಲಿ ಸಾರಿಗೆ ನೌಕರರು ಮುಷ್ಕರ ಮುಂದುವರಿಸಿದರೆ ಎಸ್ಮಾ ಕಾಯ್ದೆಯಡಿ ಸರ್ಕಾರ ಕ್ರಮ ಕೈಗೊಳ್ಳಬಹುದು ಎಂದು ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಬು ಭಕ್ರು ಹಾಗೂ ನ್ಯಾಯಮೂರ್ತಿ ಸಿ.ಎಂ. ಜೋಶಿ ನೇತೃತ್ವದ ಪೀಠ ಸೂಚಿಸಿದೆ. ಮುಷ್ಕರ ನಿಲ್ಲಿಸದಿದ್ದರೆ ನ್ಯಾಯಾಂಗ ನಿಂದನೆ ಕೇಸ್ ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದೆ. ನಿಗಮಗಳ ನೌಕರರ ಸಂಘಕ್ಕೆ ಹೈಕೋರ್ಟ್ ನೋಟಿಸ್ ನೀಡಿದ್ದು, ವಿಚಾರಣೆಯನ್ನು ಇದೇ ೬ಕ್ಕೆ ಮುಂದೂಡಿದೆ. ಹೈಕೋರ್ಟ್ ಸೂಚನೆ ಮೀರಿ ನೌಕರರು ಮುಷ್ಕರ ನಡೆಸಿದ್ದರು. ನ್ಯಾಯಾಲಯದ ಎಚ್ಚರಿಕೆ ಬೆನ್ನಲ್ಲೇ ಸಾರಿಗೆ ನೌಕರರು ಮುಷ್ಕರವನ್ನು ಮುಂದೂಡಿದ್ದಾರೆ.

**<><*<><>*><>**

ಮೆಟ್ರೋ ಯೋಜನೆ ಕೇವಲ ಕೇಂದ್ರ ಸರ್ಕಾರದ ಯೋಜನೆಯಲ್ಲ. ಇದರಲ್ಲಿ ರಾಜ್ಯ ಸರ್ಕಾರದ ಪಾಲುದಾರಿಕೆಯು ಇದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಮೆಟ್ರೋ ಹಳದಿ ಮಾರ್ಗದಲ್ಲಿ ಸಂಚರಿಸಿ ಪರಿಶೀಲನೆ ನಡೆಸಿದ ಅವರು, ಹಳದಿ ಮಾರ್ಗಕ್ಕೆ ಮೂರು ರೈಲುಗಳು ಬಂದಿದ್ದು, ೨೫ ನಿಮಿಷಕ್ಕೊಂದು ಮೆಟ್ರೋ ಸಂಚರಿಸಲಿದೆ. ರೈಲುಗಳು ಬಂದಂತೆ ಹಂತ ಹಂತವಾಗಿ ೧೦ ನಿಮಿಷಕ್ಕೊಮ್ಮೆ ಸಂಚಾರ ವ್ಯವಸ್ಥೆ ಕಲ್ಪಿಸಲಾಗುವುದು ಎಂದು ಹೇಳಿದ್ದಾರೆ. ಡಬ್ಬಲ್ ಡೆಕ್ಕರ್ ಯೋಜನೆ ಭೂಸ್ವಾಧೀನಕ್ಕೆ ಒಂದಷ್ಟು ಅನುದಾನದ ಕೊರತೆಯಿದ್ದು, ಈ ಕುರಿತಂತೆ ಪ್ರಧಾನಿಗೆ ಮನವಿ ಸಲ್ಲಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಆಗಸ್ಟ್ ೧೫ರೊಳಗೆ ಹೆಬ್ಬಾಳ ಮೇಲ್ಸೇತುವೆ ಉದ್ಘಾಟಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರು-ಬೆಳಗಾವಿ ನೂತನ ವಂದೇ ಭಾರತ್ ರೈಲು ಸಂಚಾರ ಸೇರಿದಂತೆ ಮೂರು ವಂದೇ ಭಾರತ್ ರೈಲು ಸಂಚಾರಕ್ಕೆ ಇದೇ ೧೦ ರಂದು ಪ್ರಧಾನಿ ನರೇಂದ್ರ ಮೋದಿ ಹಸಿರು ನಿಶಾನೆ ತೋರಲಿದ್ದಾರೆ. ಬೆಂಗಳೂರು-ಬೆಳಗಾವಿ, ನಾಗ್ಪುರದ

ಅಜ್ನಿ-ಪೂಣಾ ಹಾಗೂ ಅಮೃತಸರ-ಶ್ರೀ ಮಾತಾ ವೈಷ್ಣವೊ ದೇವಿ ಕಟ್ರಾ ನೂತನ ವಂದೇ ಭಾರತ್ ರೈಲಿಗೆ ಅಂದು ಚಾಲನೆ ದೊರೆಯಲಿದೆ. ತಮ್ಮ ಕೋರಿಕೆಯ ಮೇರೆಗೆ ಪ್ರಧಾನಿಯವರು ಹೊಸ ವಂದೇ ಭಾರತ್ ರೈಲಿಗೆ ಚಾಲನೆ ನೀಡಲಿದ್ದಾರೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ನವದೆಹಲಿಯಲ್ಲಿಂದು ತಿಳಿಸಿದ್ದಾರೆ. ಇದೇ ವೇಳೆ ರೈಲ್ವೆ ಸೌಲಭ್ಯ ಕಲ್ಪಿಸುವಲ್ಲಿ ಶ್ರಮಿಸಿದ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಅವರಿಗೆ ಪ್ರಲ್ಹಾದ್ ಜೋಶಿ ಧನ್ಯವಾದ ತಿಳಿಸಿದ್ದಾರೆ. ಬೆಂಗಳೂರು - ಬೆಳಗಾವಿ ವಂದೇ ಭಾರತ್ ರೈಲು ಬೆಳಗಾವಿಯಿಂದ ಬೆಳಗ್ಗೆ ೫.೨೦ ನಿಮಿಷಕ್ಕೆ ಹೊರಟು ಬೆಂಗಳೂರಿಗೆ ಮಧ್ಯಾಹ್ನ ೧.೫೦ ನಿಮಿಷಕ್ಕೆ ಆಗಮಿಸಲಿದೆ. ಹಾಗೂ, ಬೆಂಗಳೂರಿನಿಂದ ವಾಪಸ್ಸು ಮಧ್ಯಾಹ್ನ ೨.೨೦ ನಿಮಿಷಕ್ಕೆ ಹೊರಟು ರಾತ್ರಿ ೧೦.೪೦ ನಿಮಿಷಕ್ಕೆ ಬೆಳಗಾವಿಗೆ ತಲುಪಲಿದೆ. ಈ ಮೂಲಕ ಬೆಂಗಳೂರು, ತುಮಕೂರು, ದಾವಣಗೆರೆ, ಹಾವೇರಿ, ಹುಬ್ಬಳ್ಳಿ, ಧಾರವಾಡ ಹಾಗೂ ಬೆಳಗಾವಿಯ ನಡುವೆ ಸಂಪರ್ಕ ಹೆಚ್ಚಿಸಲಿದೆ.

<><*<><>*><>

ಭಾರತದ ಸರ್ವಾಂಗೀಣ ಅಭ್ಯುದಯದಲ್ಲಿ ಶಾಸನ ಸಭೆಗಳ ಹಾಗೂ ಜನಪ್ರತಿನಿಧಿಗಳ ಪಾತ್ರ ಅತ್ಯಂತ ಮಹತ್ತರವಾದುದು ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟಿದ್ದಾರೆ. ಅಮೇರಿಕಾದ ಬೋಸ್ಟನ್‌ನಲ್ಲಿ ನಡೆದ "ಶಾಸಕಾಂಗ ಶೃಂಗಸಭೆ ೨೦೨೫" ರ ವಿಚಾರ ಗೋಷ್ಠಿಯಲ್ಲಿ ತಮ್ಮ ನಾಲ್ಕು ದಶಕಗಳ ಸಂಸದೀಯ ಅನುಭವಗಳನ್ನು ಹಂಚಿಕೊಂಡಿದ್ದಾರೆ. ಸಾಮಾನ್ಯ ಜನರ ಬದುಕು, ಬವಣೆಗಳ ಬಗ್ಗೆ ತಿಳಿದುಕೊಳ್ಳಲು ಜನಪ್ರತಿನಿಧಿಗಳು ಸಾರ್ವಜನಿಕರೊಂದಿಗೆ ನೇರ ಸಂಪರ್ಕ ಹೊಂದುವುದು ಅವಶ್ಯಕವಾಗಿದೆ. ಇದರಿಂದ ನಿಜರೂಪದಲ್ಲಿ ಸಾರ್ವಜನಿಕರ ಬದುಕು ಹಸನಗೊಳಿಸಲು ಸಾಧ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಸಭಾಪತಿ ಬಸವರಾಜ ಹೊರಟ್ಟಿ ನೇತೃತ್ವದ ತಂಡ ಶೃಂಗ ಸಭೆಯ ಅಂಗವಾಗಿ ಅಮೆರಿಕಾದ ಮ್ಯಾಸಚೂಸೆಟ್ಸ್ ಸ್ಟೇಟ್ ಹೌಸ್ ಹಾಗೂ ಅಂತಾರಾಷ್ಟ್ರೀಯ ಖ್ಯಾತಿಯ ಹಾರ್ವರ್ಡ್ ವಿಶ್ವವಿದ್ಯಾಲಯಕ್ಕೆ ಭೇಟಿ ನೀಡಿ ಅಮೆರಿಕಾದಲ್ಲಿರುವ ಭಾರತೀಯ ಮೂಲದ ಶೈಕ್ಷಣಿಕ ತಜ್ಞರೊಂದಿಗೆ ಸಂವಾದ ನಡೆಸಿದರು.

<><*<><>*><>

ಸಾರಿಗೆ ನೌಕರರ ಸಮಸ್ಯೆಯನ್ನು ಸರ್ಕಾರ ತಕ್ಷಣ ಪರಿಹರಿಸಬೇಕೆಂದು ಮಾಜಿ ಉಪ ಮುಖ್ಯಮಂತ್ರಿ ಮತ್ತು ಶಾಸಕ ಡಾ.ಸಿ.ಎನ್. ಅಶ್ವತ್ಥನಾರಾಯಣ್ ಒತ್ತಾಯಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಮಾತು ಕೊಟ್ಟಂತೆ ನಡೆದಿಲ್ಲ ಎಂದು ದೂರಿದ್ದಾರೆ. ನೌಕರರ ಪರವಾಗಿ ಬಿಜೆಪಿ ಧ್ವನಿ ಎತ್ತಲಿದ್ದು, ಸದನದಲ್ಲೂ ಈ ವಿಷಯ ಪ್ರಸ್ತಾಪಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಠಾಣಾ ವ್ಯಾಪ್ತಿಯಲ್ಲಿ ಶವಗಳನ್ನು ಹೂತು ಹಾಕಲಾಗಿದೆ ಎನ್ನುವ ಪ್ರಕರಣದ ತನಿಖೆ ಚುರುಕು ಪಡೆದಿದೆ. ಸಾಕ್ಷಿ ದೂರುದಾರ ಹೇಳಿದ ಸಮಾಧಿ ಸ್ಥಳ ಸಂಖ್ಯೆ ೧೧ ರಲ್ಲಿ ಇಂದು ಕಾರ್ಯಾಚರಣೆ ನಡೆಸಲಾಗಿದೆ. ನಿನ್ನೆಯ ಕಾರ್ಯಾಚರಣೆ ವೇಳೆ ಸುಮಾರು ೧೧೪ ಮೂಳೆಗಳು ಪತ್ತೆಯಾಗಿವೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಆಗಸ್ಟ್ ೧ ರಂದು ಮಾನವ ಮೃತದೇಹದ ಅವಶೇಷ ಪತ್ತೆಯಾದ ಕುರಿತಂತೆ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ಆಗಸ್ಟ್ ೪ ರಂದು ಮತ್ತೋರ್ವ ದೂರುದಾರ ಧರ್ಮಸ್ಥಳ ಪೊಲೀಸ್ ಠಾಣೆಗೆ ತೆರಳಿ, ಯುವತಿಯೊಬ್ಬಳ ಮೃತದೇಹವನ್ನು ಹೂತು ಹಾಕಿರುವುದನ್ನು ತಾನು ನೋಡಿದ್ದಾಗಿ ದೂರು ನೀಡಿದ್ದರು. ಈ ಎಲ್ಲಾ ಪ್ರಕರಣದ ವಿಚಾರಣೆಯನ್ನು ಎಸ್‌ಐಟಿ ತಂಡಕ್ಕೆ ಹಸ್ತಾಂತರಿಸುವಂತೆ ಪೊಲೀಸ್ ಮಹಾ ನಿರ್ದೇಶಕರು ಆದೇಶ ನೀಡಿದ್ದಾರೆ.

<><*<><>*><>

ರಾಯಚೂರು ಜಿಲ್ಲೆಯಲ್ಲಿ ೧೮ ವರ್ಷದೊಳಗಿನ ಮಕ್ಕಳ ಪ್ರಕರಣಗಳಲ್ಲಿ ಸುದ್ದಿ ಪ್ರಸಾರ ಮಾಡುವಾಗ ಮಕ್ಕಳ ಮಾಹಿತಿಯನ್ನು ಗೌಪ್ಯವಾಗಿ ಇಡಬೇಕೆಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಅಮರೇಶ್ ಹಾವಿನ್ ತಿಳಿಸಿದ್ದಾರೆ. ಇತ್ತೀಚೆಗೆ ರಾಜ್ಯದ್ಯಾಂತ ಸುದ್ದಿಯಾದ ತಾತಪ್ಪನ ಪ್ರಕರಣದಲ್ಲಿ ನೊಂದ

ಬಾಲಕಿಯು ಅಪ್ರಾಪ್ತಳಾಗಿರುವುದರಿಂದ ಅವಳ ವೈಯಕ್ತಿಯ ಮಾಹಿತಿಯನ್ನು ಪತ್ರಿಕೆ ಹಾಗೂ ಕೆಲ ಟಿ.ವಿ. ಮಾಧ್ಯಮಗಳಲ್ಲಿ ಪ್ರಸಾರ ಮಾಡಲಾಗಿದೆ. ಈ ಮಾಧ್ಯಮಗಳಲ್ಲಿ ಪ್ರಕಟವಾದ ವಿಡಿಯೋ ಮತ್ತು ಛಾಯಾಚಿತ್ರಗಳನ್ನು ಕೂಡಲೇ ಅಳಿಸಲು ಸಂಬಂಧಪಟ್ಟವರಿಗೆ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯರಾದ ಶಶಿಧರ್ ಕೊಸುಂಬೆ ಸೂಚಿಸಿದ್ದಾರೆ.

<><*<><>*><>

ಶೋಷಣೆ, ದೌರ್ಜನ್ಯದ ವಿರುದ್ಧ ಮಹಿಳೆ ಧ್ವನಿ ಎತ್ತಬೇಕು. ಅದು ಶಿಕ್ಷಣದಿಂದ ಮಾತ್ರ ಬದಲಾವಣೆ ಸಾಧ್ಯ ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿ ತಿಳಿಸಿದ್ದಾರೆ. ಹಾವೇರಿಯಲ್ಲಿಂದು ಪದವಿಪೂರ್ವ ಹಾಗೂ ಪದವಿ ಕಾಲೇಜುಗಳ ವಿದ್ಯಾರ್ಥಿನಿಯರ ಜೊತೆಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಹೆಣ್ಣು ಮಕ್ಕಳು ದೌರ್ಜನ್ಯ ಶೋಷಣೆ ದಬ್ಬಾಳಿಕೆಗೆ ಒಳಗಾಗುವುದು ವಿಷಾದನೀಯ ಎಂದು ಅಭಿಪ್ರಾಯಪಟ್ಟಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಳೆದ ೭ ತಿಂಗಳ ಹಿಂದೆ ನೀಡಿದ ಆದೇಶಗಳನ್ನು ಕೂಡಲೇ ಜಾರಿ ಮಾಡಬೇಕೆಂದು ಇದೇ ೧೨ ರಿಂದ ಮೂರು ದಿನಗಳ ಕಾಲ ರಾಜ್ಯವ್ಯಾಪಿ ಜಿಲ್ಲಾ ಮಟ್ಟದ ಅಹೋರಾತ್ರಿ ಪ್ರತಿಭಟನಾ ಧರಣಿ ನಡೆಸಲು ಆಶಾಕಾರ್ಯಕರ್ತೆಯರು ನಿರ್ಧರಿಸಿದ್ದಾರೆ. ಬಳ್ಳಾರಿಯಲ್ಲಿ ಸಂಘದ ರಾಜ್ಯ ಕಾರ್ಯದರ್ಶಿ ಡಿ.ನಾಗಲಕ್ಷ್ಮಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ, ಅಂಗನವಾಡಿ, ಬಿಸಿಯೂಟ ನೌಕರರಿಗೆ ಹೆಚ್ಚಿಸಿದಂತೆ ತಮಗೂ ಗೌರವ ಧನ ಒಂದು ಸಾವಿರ ರೂಪಾಯಿ ಹೆಚ್ಚಳ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

<><*<><>*><>

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಪ್ರತಿಭಟನೆಗೆ ಅನುಕೂಲವಾಗುವಂತೆ ಆವರಣ ಗೋಡೆ ಕೆಡವಿ ಮರಗಳನ್ನು ಕಡಿಯಲಾಗಿದೆ ಎಂದು ಬಿಜೆಪಿ ಆರೋಪಿಸಿದೆ. ಈ ಕುರಿತಂತೆ ಇಂದು ಬೆಂಗಳೂರಿನ ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದೆ. ಆಯೋಜಕರು ಮತ್ತು ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

<><*<><>*><>

ಬೆಂಗಳೂರಿನಲ್ಲಿ ನಡೆಯುತ್ತಿರುವ ಮಹಾರಾಣಿ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿ ಹುಬ್ಬಳ್ಳಿ ಟೈಗರ್ಸ್ ತಂಡವು ಮೈಸೂರು ವಾರಿಯರ್ಸ್ ತಂಡವನ್ನು ೯ ವಿಕೆಟ್‌ಗಳಿಂದ ಸೋಲಿಸಿದೆ. ಇಂದು ನಡೆಯುವ ಮತ್ತೊಂದು ಪಂದ್ಯದಲ್ಲಿ ಶಿವಮೊಗ್ಗ ಲಯನ್ಸ್ ಹಾಗೂ ಹುಬ್ಬಳ್ಳಿ ಟೈಗರ್ಸ್ ನಡುವಿನ ತಂಡ ಮಳೆಯಿಂದಾಗಿ ರದ್ದಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**